**ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇಂಡಿ.**

**ಸಿಸಿ.ನಂ.294/2016**

**ಸಿ.ಡಬ್ಲ್ಯೂ-09**

**ಪಿ.ಡಬ್ಲ್ಯೂ-05**

| | |
|---|---|
| ಸಾಕ್ಷಿಯ ಹೆಸರು | : ಶ್ರೀಶೈಲ ನಂದ್ರಾಳ |
| ತಂದೆ/ಗಂಡನ ಹೆಸರು | : ನಿವರ್ತಿ |
| ವಯಸ್ಸು | : 70 ವರ್ಷ |
| ಉದ್ಯೋಗ | : ನಿವೃತ್ತ ಎ.ಎಸ್.ಐ. |
| ವಾಸಸ್ಥಳ | : ನಂದ್ರಾಳ |

**ದಿನಾಂಕ: 19-02-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ**

ನಾನು ದಿಃ2012 ರಿಂದ 2016 ರ ವರೆಗೆ ಝಳಕಿ ಪೊಲೀಸ ಠಾಣೆಯಲ್ಲಿ ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ25.05.2015 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ 1 ರವರು ದಾಳಿ ಪಂಚನಾಮೆ, ಆರೋಪಿ ಮತ್ತು ಮುದ್ದೆಮಾಲುಗಳೊಂದಿಗೆ ಠಾಣೆಗೆ ಹಾಜರಾಗಿ ಸರ್ಕಾರದ ಪರವಾಗಿ ದೂರನ್ನು ನೀಡಿರುತ್ತಾರೆ. ಸದರಿ ದೂರಿನ ಸಾರಾಂಶದ ಮೇರೆಗೆ ಠಾಣಾ ಗುನ್ನಾ ನಂ.54/2015 ರಂತೆ ಪ್ರಕರಣವನ್ನು ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಪ್ರ.ವ.ವ.ವನ್ನು ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ಮಾನ್ಯ ನ್ಯಾಯಾಲಯಕ್ಕೆ ಸ್ವತ್ತಿನ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಆರೋಪಿಯನ್ನು ನ್ಯಾ ಯಾಯಂಗಬಂಧನದ ಕುರಿತು ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ಚಾಸಾ 4 ರಿಂದ 7 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಜಪ್ತಾದ ಮುದ್ದೆಮಾಲನ್ನು ದಿಃ17.08.2015 ರಂದು ರಾ.ಪ. ಕುರಿತು ಬೆಳಗಾವಿಗೆ ಕಳುಹಿಸಿಕೊಟ್ಟಿರುತ್ತೇನೆ. ದಿಃ26.12.2015 ರಂದು ರಾ.ಪ. ವರದಿಯನ್ನು ಸ್ವೀಕರಿಸಿರುತ್ತೇನೆ. ತನಿಖೆ ಪೂರ್ಣಗೊಂಡಿದ್ದರಿಂದ ಆರೋಪಿಯ ವಿರುದ್ಧ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮು.ಮಾ.1 ಮತ್ತು ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿ.ಪಿ.4 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿ.ಪಿ.4(ಬಿ) ಎಂದು, ಸಾಕ್ಷಿಯು ರಾ.ಪ.

ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.5(ಎ) ಎಂದು, ನಿ.ಪಿ.2 ಮತ್ತು 3 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿ.ಪಿ.2(ಬಿ) ಮತ್ತು 3(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: ಆರೋಪಿ ಪರ ಶ್ರೀ.ಎಮ್.ಎಸ್.ಪಿ. ವಕೀಲರಿಂದಃ**

ದಿಃ25.05.2015 ರಂದು ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ 1 ರವರು ದಾಳಿ ಪಂಚನಾಮೆ, ಆರೋಪಿ ಮತ್ತು ಮುದ್ದೆಮಾಲುಗಳೊಂದಿಗೆ ಠಾಣೆಗೆ ಹಾಜರಾಗಿ ಸರ್ಕಾರದ ಪರವಾಗಿ ದೂರನ್ನು ನೀಡಿರುತ್ತಾರೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ದೂರಿನ ಸಾರಾಂಶದ ಮೇರೆಗೆ ಠಾಣಾ ಗುನ್ಾ ನಂ.54/2015 ರಂತೆ ಪ್ರಕರಣವನ್ನು ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಪ್ರ.ವ.ವನ್ನು ಕಳುಹಿಸಿಕೊಟ್ಟಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅದೇ ದಿನ ಮಾನ್ಯ ನ್ಯಾಯಾಲಯಕ್ಕೆ ಸ್ವತ್ತಿನ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಸಾ 4 ರಿಂದ 7 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

**ಓ.ಹೆ.ಕೆ. ಸರಿ ಇದೆ**

ಸಹಿ/-

**ನ್ಯಾಯಿಕ ದಂಡಾಧಿಕಾರಿಗಳು, ಇಂಡಿ.**